## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದಲ್ಲಿ ತಂಬಾಕು ಬೆಳೆಯ ಪ್ರಮಾಣವನ್ನು ಕಡಿಮೆಗೊಳಿಸಲು ರಾಜ್ಯ ಮಟ್ಟದ ತಾಂತ್ರಿಕ ಉಪಸಮಿತಿ ರಚಿಸುವ ಬಗ್ಗೆ.

ಓದಲಾಗಿದೆ: ಆಯುಕ್ತರು, ಕೃಷಿ ಇಲಾಖೆ ಇವರ ಪತ್ರ ಸಂ:ಜಕೃನಿ(CSS)/NFSM/Tobacco-CDP/2019-20, ದಿ:14.08.2019.

******

ಪ್ರಸ್ತಾವನೆ :

ಮೇಲೆ ಕ್ರಮ ಸಂಖ್ಯೆ:1 ರಲ್ಲಿ ಓದಲಾದ ಆಯುಕ್ತರು, ಕೃಷಿ ಇಲಾಖೆ ಇವರ ಪತ್ರದಲ್ಲಿ ತಂಬಾಕು ಬೆಳೆಯನ್ನು ಬೆಳೆಯುವುದರಿಂದ ಬೆಳೆಗಾರರ ಹಾಗೂ ಬಳಕೆದಾರರ ಆರೋಗ್ಯಕ್ಕೆ ಹಾನಿಕಾರಿಯಾಗಿರುತ್ತದೆ. ಸದರಿ ಬೆಳೆಯ ಬದಲಿಗೆ ಸೂಕ್ತ ಬದಲಿಗೆ ಸೂಕ್ತ ಪರ್ಯಾಯ ಕೃಷಿ/ತೋಟಗಾರಿಕೆ ಬೆಳೆಸಲು ಪ್ರೋತ್ಸಾಹ ನೀಡುವುದು ಪ್ರಸ್ತುತ ಅವಶ್ಯಕವಾಗಿದೆ. ತಂಬಾಕು ಬೆಳೆಗೆ ಪರ್ಯಾಯವಾಗಿ ಕೃಷಿ/ತೋಟಗಾರಿಕೆ ಬೆಳೆ ಬೆಳೆಸುವುದನ್ನು ಉತ್ತೇಜಿಸಲು ಕೇಂದ್ರ ಪುರಸ್ಕೃತ ಯೋಜನೆಯಡಿ ಬೆಳೆ ವೈವಿಧ್ಯತೆ ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ತಿಳಿಸುತ್ತಾ, ದಿ: 25.05.2019 ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು ಇವರ ಅಧ್ಯಕ್ಷತೆಯಲ್ಲಿ ನಡೆದ ಉನ್ನತ ಮಟ್ಟದ ಸಮಿತಿ(ತಂಬಾಕು ನಿಯಂತ್ರಣ) ಸಭೆಯಲ್ಲಿ ತಂಬಾಕು ಬೆಳೆಯ ಪ್ರಮಾಣವನ್ನು ಕಡಿಮೆಗೊಳಿಸುವ ಕುರಿತು ನಿಗಧಿತವಾಗಿ ಪರಿಶೀಲಿಸಲು ಆಯುಕ್ತರು, ಕೃಷಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದಲ್ಲಿ ತಾಂತ್ರಿಕ ಉಪಸಮಿತಿಯನ್ನು ರಚಿಸುವಂತೆ ಸೂಚಿಸಿರುವ ಹಿನ್ನೆಲೆಯಲ್ಲಿ ಈ ಕೆಳಕಂಡ ರಾಜ್ಯ ಮಟ್ಟದ ಉಪಸಮಿತಿಯನ್ನು ರಚಿಸುವಂತೆ ಕೋರಲಾಗಿರುತ್ತದೆ.

| ಕ್ರ.ಸಂ | ಹುದ್ದೆ | ವಿವರ |
|---|---|---|
| 1 | ಆಯುಕ್ತರು, ಕೃಷಿ ಇಲಾಖೆ | ಅಧ್ಯಕ್ಷರು |
| 2 | ಕೃಷಿ ನಿರ್ದೇಶಕರು, ಕೃಷಿ ಇಲಾಖೆ | ಸದಸ್ಯರು |
| 3 | ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ | ಸದಸ್ಯರು |
| 4 | ನಿರ್ದೇಶಕರು, ತೋಟಗಾರಿಕೆ ಇಲಾಖೆ. | ಸದಸ್ಯರು |
| 5 | ನಿರ್ದೇಶಕರು, ತಂಬಾಕು ಮಂಡಳಿ | ಸದಸ್ಯರು |
| 6 | ಅಪರ ಕೃಷಿ ನಿರ್ದೇಶಕರು (ಸಾವಯವ ಕೃಷಿ) | ಸದಸ್ಯ ಕಾರ್ಯದರ್ಶಿಗಳು |
| 7 | ಸಹ ಸಂಯೋಜಕರು, ಕೃಷಿ ವಿಜ್ಞಾನ ಕೇಂದ್ರ, ಬೆಳಗಾಂ, ಮೈಸೂರು ಹಾಗೂ ಹಾಸನ | ಸದಸ್ಯರು |
| 8 | ಜಂಟಿ ಕೃಷಿ ನಿರ್ದೇಶಕರು, ಬೆಳಗಾಂ, ಮೈಸೂರು ಹಾಗೂ ಹಾಸನ | ಸದಸ್ಯರು |

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಸಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಕೃಇ 56 ಕೃಉಇ 2019, ಬೆಂಗಳೂರು, ದಿ:09-09-2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ತಂಬಾಕು ಬೆಳೆಯ ಪ್ರಮಾಣವನ್ನು ಕಡಿಮೆಗೊಳಿಸುವ ಕುರಿತು ನಿಗಧಿತವಾಗಿ ಪರಿಶೀಲಿಸಲು ಈ ಕೆಳಕಂಡ ರಾಜ್ಯ ಮಟ್ಟದ ತಾಂತ್ರಿಕ ಉಪ ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ.

| ಕ್ರ.ಸಂ | ಹುದ್ದೆ | ವಿವರ |
|---|---|---|
| 1 | ಆಯುಕ್ತರು, ಕೃಷಿ ಇಲಾಖೆ | ಅಧ್ಯಕ್ಷರು |
| 2 | ಕೃಷಿ ನಿರ್ದೇಶಕರು, ಕೃಷಿ ಇಲಾಖೆ | ಸದಸ್ಯರು |
| 3 | ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ | ಸದಸ್ಯರು |
| 4 | ನಿರ್ದೇಶಕರು, ತೋಟಗಾರಿಕೆ ಇಲಾಖೆ. | ಸದಸ್ಯರು |
| 5 | ನಿರ್ದೇಶಕರು, ತಂಬಾಕು ಮಂಡಳಿ | ಸದಸ್ಯರು |
| 6 | ಅಪರ ಕೃಷಿ ನಿರ್ದೇಶಕರು (ಸಾವಯವ ಕೃಷಿ) | ಸದಸ್ಯ ಕಾರ್ಯದರ್ಶಿಗಳು |
| 7 | ಸಹ ಸಂಯೋಜಕರು, ಕೃಷಿ ವಿಜ್ಞಾನ ಕೇಂದ್ರ, ಬೆಳಗಾಂ, ಮೈಸೂರು ಹಾಗೂ ಹಾಸನ | ಸದಸ್ಯರು |
| 8 | ಜಂಟಿ ಕೃಷಿ ನಿರ್ದೇಶಕರು, ಬೆಳಗಾಂ, ಮೈಸೂರು ಹಾಗೂ ಹಾಸನ | ಸದಸ್ಯರು |

ಸದರಿ ಸಮಿತಿಯ ಕರ್ತವ್ಯಗಳು:

1. FCV & Non FCV ತಂಬಾಕು ಬೆಳೆಯನ್ನು ಹಂತ ಹಂತವಾಗಿ ಕಡಿಮೆ ಮಾಡಲು ಕೃಷಿ/ತೋಟಗಾರಿಕೆ ಅಡಿಯಲ್ಲಿ Cost Benefit Ratio ಹೆಚ್ಚಿಗೆ ಇರುವ ಪರ್ಯಾಯ ಬೆಳೆಗಳ ಕುರಿತು ವಿಶ್ಲೇಷಿಸಿ ಕ್ರಿಯಾಯೋಜನೆ ರೂಪಿಸುವುದು
2. ಪ್ರತಿ ಆರು ತಿಂಗಳಿಗೊಮ್ಮೆ ಸಭೆ ನಡೆಸಿ ಪ್ರಗತಿ ಪರಿಶೀಲನೆ ನಡೆಸುವುದು ಮತ್ತು ಉನ್ನತ ಮಟ್ಟದ ಸಮಿತಿ(ತಂಬಾಕು ನಿಯಂತ್ರಣ)ಗೆ ವರದಿಯನ್ನು ಸಲ್ಲಿಸುವುದು

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

B S Nagaratnam

(ಬಿ.ಎಸ್.ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ)

9/9

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) / (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.

2. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಬೆಂಗಳೂರು.

3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.

4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.

5. ಕೃಷಿ ಆಯುಕ್ತರು/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.

6. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು.

7. ನಿರ್ದೇಶಕರು, ತೋಟಗಾರಿಕೆ ಇಲಾಖೆ, ಲಾಲ್‌ಬಾಗ್ ಬೆಂಗಳೂರು.

8. ನಿರ್ದೇಶಕರು, ತಂಬಾಕು ಮಂಡಳಿ, ಬೆಂಗಳೂರು.

9. ಅಪರ ಕೃಷಿ ನಿರ್ದೇಶಕರು (ಸಾವಯವ ಕೃಷಿ), ಕೃಷಿ ಆಯುಕ್ತಾಲಯ, ಬೆಂಗಳೂರು.

10. ಸಹ ಸಂಯೋಜಕರು, ಕೃಷಿ ವಿಜ್ಞಾನ ಕೇಂದ್ರ, ಬೆಳಗಾವಿ, ಮೈಸೂರು, ಹಾಸನ

11. ಜಂಟಿ ಕೃಷಿ ನಿರ್ದೇಶಕರು, ಬೆಳಗಾವಿ, ಮೈಸೂರು, ಹಾಸನ.

12. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

(ಕ್ರ.ಸಂ:10 & 11 ನಿರ್ದೇಕರು, ಕೃಷಿ ಇಲಾಖೆ ಇವರ ಮುಖಾಂತರ)

*****